ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಎಸ್.ಸಿ.ಪಿ ಮತ್ತು ಟಿ.ಎಸ್.ಪಿ. ಯೋಜನೆಗೆ ನಿಗದಿಗೊಳಿಸಿದ ಮೊತ್ತದ ಬಗ್ಗೆ

ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು):-

699 (721) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಲ್ಲಿ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ. ಯೋಜನೆಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ರಾಜ್ಯದಲ್ಲಿ ನಿಗದಿಪಡಿಸಿದ ಮೊತ್ತವೆಷ್ಟು; (ವಿವರಗಳನ್ನು ನೀಡುವುದು)

(ಆ) ಈ ಯೋಜನೆಗೆ ಕಳೆದ ಮೂರು ವರ್ಷಗಳಲ್ಲಿ ವೆಚ್ಚ ಮಾಡಿರುವ ಮೊತ್ತವೆಷ್ಟು; (ಕಾಮಗಾರಿ ಮತ್ತು ಜಿಲ್ಲಾವಾರು ವಿವರಗಳನ್ನು ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಯಡಿ ಕೈಗೆತ್ತಿಕೊಂಡಿರುವ ಕಾಮಗಾರಿಗಳು ಯಾವುವು ಮತ್ತು ವೆಚ್ಚ ಮಾಡಿರುವ ಮೊತ್ತವೆಷ್ಟು; (ವಿಧಾನಸಭಾ ಕ್ಷೇತ್ರಗಳವಾರು ವಿವರಗಳನ್ನು ನೀಡುವುದು)

(ಈ) ಹಾಗಿದ್ದಲ್ಲಿ, ಸದರಿ ಯೋಜನೆಯಡಿ ಇದುವರೆವಿಗೂ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; ಇವುಗಳಲ್ಲಿ ಪೂರ್ಣವಾಗಿರುವ ಮತ್ತು ಅಪೂರ್ಣವಾಗಿರುವ ಕಾಮಗಾರಿಗಳಾವುವು? (ವಿಧಾನ ಕ್ಷೇತ್ರಗಳವಾರು ವಿವರಗಳನ್ನು ನೀಡುವುದು)